3) ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು **ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ ಬಿ.ಐ.ಎ.ಎ.ಪಿ.ಎ/ ಬಿ.ಬಿ.ಎಂ.ಪಿ/ ಬಿ.ಎಂ.ಆರ್.ಡಿ.ಎ. (ಸ್ಥಳೀಯ ಯೋಜನಾ ಪ್ರಾಧಿಕಾರ) ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ** ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್/ ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.

4) ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಉದ್ಯಾನವನ, ಸಿ.ಎ.ನಿವೇಶನ, ಖಾಲಿ ಜಾಗ, ಇತ್ಯಾದಿಗಳನ್ನು **ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಐ.ಎ.ಎ.ಪಿ.ಎ/ಬಿ.ಎಂ.ಆರ್.ಡಿ.ಎ.(ಸ್ಥಳೀಯ ಯೋಜನಾ ಪ್ರಾಧಿಕಾರ) ಬಿ.ಬಿ.ಎಂ.ಪಿ/ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ** ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟಪಡಿಸಿದ ನಿಯಮಗಳ ರೀತ್ಯಾ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

5) **ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೆ ನಿವೇಶನಗಳನ್ನು/ಕಟ್ಟಡಗಳನ್ನು ಸಂಬಂಧಪಟ್ಟ ನೋಂದಣಾಧಿಕಾರಿಗಳಿಂದ/ಉಪನೋಂದಣಾಧಿಕಾರಿಗಳಿಂದ ನೋಂದಾವಣಿ ಮಾಡತಕ್ಕದ್ದಲ್ಲ, ಖಾತೆದಾರರು ಒಂದು ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿನ ಪೂರ್ಣ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದಲ್ಲಿ ಈ ಆದೇಶ ಅಡ್ಡಿ ಬರುವುದಿಲ್ಲ.**

6) ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ಕುಡಿಯುವ ನೀರು, ರಸ್ತೆ, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತ್ಯ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

7) **ಈ ಜಮೀನಿಗೆ ತಾಕು ಪೋಟ್ ಖರಾಬ್ ಜಮೀನು ಇದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 67 ರಂತೆ ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು. ಹಾಗೂ ಆರ್.ಟಿ.ಸಿ.ದಾಖಲೆಯಂತೆ ಪ್ರಸ್ತುತ ಭೂ ಪರಿವರ್ತನೆಗೆ ಒಳಪಟ್ಟಿರುವ ಸ.ನಂ. 28 ರಲ್ಲಿ 0–01 ಗುಂಟೆ ವಿಸ್ತೀರ್ಣ "ಬಿ" ಖರಾಬಿನಲ್ಲಿ ಬರುವ ಕಾರಣ ಇದನ್ನು ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿರಿಸಲಾಗಿದೆ. ಈ ವಿಸ್ತೀರ್ಣದ ಮೇಲೆ ಅರ್ಜಿದಾರರಿಗೆ ಯಾವುದೇ ಹಕ್ಕು ಇರುವುದಿಲ್ಲ. ಈ "ಬಿ" ಈ ವಿಸ್ತೀರ್ಣದ ಹಕ್ಕು ಯಾವಾಗಲೂ ಸರ್ಕಾರಕ್ಕೆ ಸೇರಿರುತ್ತದೆ. ಈ ಖರಾಬು ವಿಸ್ತೀರ್ಣವನ್ನು ಅರ್ಜಿದಾರರು ಯಾವುದಾದರೂ ಉದ್ದೇಶಕ್ಕೆ ಉಪಯೋಗಿಸಿಕೊಳ್ಳುವುದು ಕಂಡು ಬಂದಲ್ಲಿ ಈ ಭೂ ಪರಿವರ್ತನಾ ಆದೇಶವು ತನ್ನತಾನೇ ರದ್ದಾಗುತ್ತದೆ ಎಂದು ತಿಳಿಯತಕ್ಕದ್ದು. ತಹಶೀಲ್ದಾರರವರು ಈ ಬಾಬ್ತು ಆರ್.ಟಿ.ಸಿ.ಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.**

8) ಸರ್ಕಾರದ ಆದೇಶ ಸಂಖ್ಯೆ ಪಿಡಬ್ಲ್ಯೂಡಿ 7556–665 ಆರ್ ಮತ್ತು ಬಿ–6–54–5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ. ಪಿ.1/7(11)67, ದಿನಾಂಕ: 01–01–1966 ರಂತೆ ಸರ್ಕಾರವು ಕಾಲ ಕಾಲಕ್ಕೆ ನೀಡುವ ಆದೇಶದಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾಯ್ದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9) **ಭೂ ಪರಿವರ್ತನೆ ಮಂಜೂರಿ ಯಾವ ಉದ್ದೇಶಕ್ಕೆ ಆಗಿರುತ್ತದೆಯೋ ಅದೇ ಉದ್ದೇಶಕ್ಕೆ ಈ ದಿನದಿಂದ ಎರಡು ವರ್ಷಗಳ ಒಳಗಾಗಿ ಉಪಯೋಗಿಸತಕ್ಕದ್ದು.**

10) ಈ ಭೂ ಪರಿವರ್ತನಾ ಜಮೀನಿನಲ್ಲಿ **ಸ್ಥಾಪಿಸಲಾಗುವ ಕೈಗಾರಿಕಾ ಘಟಕಗಳು ಹೊರದೂಡುವ ಹೊಗೆ, ಅನಿಲ, ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು.** ಕೈಗಾರಿಕಾ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ಕೈಗಾರಿಕಾ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪರಿಸರ ಇಲಾಖೆಗೆ ಅನುಮತಿ ಹೊಂದಿರತಕ್ಕದ್ದು.

ಕರ್ನಾಟಕ ಸರ್ಕಾರ

ಸಂ:ಎ.ಎಲ್.ಎನ್:(ಎನ್.ಎ.ವೈ)ಎಸ್.ಆರ್:161/09-10

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ: 27-3-2010

ಅಧಿಕೃತ ಜ್ಞಾಪನ

ವಿಷಯ:- ಬೆಂಗಳೂರು ಜಿಲ್ಲೆ, ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಯಲಹಂಕ ಹೋಬಳಿ, ಅಟ್ಟೂರು ಗ್ರಾಮದ ಸರ್ವೆ ನಂಬರ್ 28 ರಲ್ಲಿ 3-00 ಎಕರೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತನೆ ಕೋರಿ ಶ್ರೀ ವಾಸುದೇವರೆಡ್ಡಿ ಬಿನ್ ಜಿ.ಕೃಷ್ಣಾರೆಡ್ಡಿ ರವರು ಸಲ್ಲಿಸಿರುವ ಅರ್ಜಿ ದಿನಾಂಕ: 2-2-2010.

ಉಲ್ಲೇಖ:- 1) ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ 7 ಎಲ್‌ಜಿಪಿ 95, ದಿನಾಂಕ: 07-06-1999.

2) ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ 56 ಎಲ್‌ಜಿಪಿ 2008, ದಿನಾಂಕ: 10-9-2008 ಮತ್ತು 24-09-2008.

3) ತಹಶೀಲ್ದಾರ್, ಬೆಂಗಳೂರು ಉತ್ತರ (ಅಪರ) ತಾಲ್ಲೂಕು ರವರ ವರದಿ ಸಂಖ್ಯೆ: ಎ.ಎಲ್.ಎನ್:ಎಸ್.ಆರ್: 7/09-10, ದಿನಾಂಕ: 9-2-2010.

4) ಭೂ ಪರಿವರ್ತನಾ ಶುಲ್ಕ ರೂ. 1,63,350-00 ಮತ್ತು ಮೋಡಿ ಶುಲ್ಕ ರೂ. 55-00 ಒಟ್ಟು ರೂ.1,63,405-00 ಗಳನ್ನು ಕ್ರಮವಾಗಿ ಚಲನ್ ನಂ. 83, ದಿನಾಂಕ: 22-3-2010 ರಂದು ಎಸ್.ಬಿ.ಎಂ.ಗೆ ಅರ್ಜಿದಾರರು ಜಮಾ ಮಾಡಿರುತ್ತಾರೆ.

5)ಜಂಟಿ ನಿರ್ದೇಶಕರು (ಪಶ್ಚಿಮ),ನಗರ ಯೋಜನಾ ವಿಭಾಗ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರ ಪತ್ರ ಸಂಖ್ಯೆ: ಬೆಂಅಪ್ರಾ/ನಯೋಸ/ಜಿ.ಸಿ-1123/4184/09-10, ದಿನಾಂಕ: 2-3-2010 ಮತ್ತು ಉಪಆಯುಕ್ತರು (ಭೂಸ್ವಾ), ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ರವರ ಪತ್ರ ಸಂಖ್ಯೆ ಬೆಂಅಪ್ರಾ/ಉಆ(ಭೂಸ್ವಾ)/1671/09-10, ದಿನಾಂಕ: 16-3-2010.

* * * * *

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 95(2), 95(4) ಮತ್ತು 95(7)ರ ಷರತ್ತುಗಳು ಹಾಗೂ ಷರತ್ತುಗೊಳಪಡಿಸಿ, ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994 ರ ನಿಯಮ 107(1) ರಂತೆ ಎಕರೆ ಒಂದಕ್ಕೆ ರೂ. 54,450-00 (ಐವತ್ತನಾಲ್ಕು ಸಾವಿರದ ನಾಲ್ಕುನೂರ ಐವತ್ತು ರೂಪಾಯಿಗಳು ಮಾತ್ರ) ಅರ್ಜಿದಾರರು ಉಲ್ಲೇಖ (4) ರಲ್ಲಿ ನಮೂದಿಸಿರುವಂತೆ, ಹಣವನ್ನು ಜಮಾ ಮಾಡಿದ ಮೇರೆಗೆ ಅರ್ಜಿದಾರರಾದ ಶ್ರೀ ವಾಸುದೇವರೆಡ್ಡಿ ಬಿನ್ ಜಿ.ಕೃಷ್ಣಾರೆಡ್ಡಿ , ನಂ.459, ತ್ರಿವೇಣಿ ರಸ್ತೆ, ಕೆ.ಆರ್.ಎಕ್ಸ್‌ಟೆನ್ಷನ್, ಯಶವಂತಪುರ ಟೌನ್, ಬೆಂಗಳೂರು 22 ರವರ ಅರ್ಜಿಯನ್ನು ಪರಿಗಣಿಸಿ ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಯಲಹಂಕ ಹೋಬಳಿ, ಅಟ್ಟೂರು ಗ್ರಾಮದ, ಸ.ನಂ. 28 ರಲ್ಲಿ 3-00 ಎಕರೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದಉದ್ದೇಶಕ್ಕಾಗಿ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1) ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರದಿಂದ ಅಂದರೆ, ಬೆಂಗಳೂರು **ಅಭಿವೃದ್ಧಿ ಪ್ರಾಧಿಕಾರ/ಬಿ.ಐ.ಎ.ಎ.ಪಿ.ಎ/ಬಿ.ಎಂ.ಆರ್.ಡಿ.ಎ. (ಸ್ಥಳೀಯ ಯೋಜನಾ ಪ್ರಾಧಿಕಾರ) ಬಿ.ಬಿ.ಎಂ.ಪಿ/ ಬಿ.ಎಂ.ಐ.ಸಿ.ಎ.ಪಿ.ಎ/ ಮಾಲಿನ್ಯ ನಿಯಂತ್ರಣಾ ಮಂಡಳಿ** ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.

2) ಈ ಪರಿವರ್ತಿತ ಜಮೀನನ್ನು ವಾಸದ ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೇ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು

11) ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ / ರಿಟ್ ಅರ್ಜಿ/ ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

12) ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

13) ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶವನ್ನು ಯಾವುದೇ ಸೂಚನೆ ನೀಡದೇ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು. ಅಲ್ಲದೇ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೇ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು. ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೇದಾರರಿಂದ ವಸೂಲಿ ಮಾಡಲಾಗುವುದು.

**ಷೆಡ್ಯೂಲ್ ವಿವರ**

ಬೆಂಗಳೂರು ಜಿಲ್ಲೆ, ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಯಲಹಂಕ ಹೋಬಳಿ, ಅಟ್ಟೂರು ಗ್ರಾಮದ ಸ.ನಂ. 28 ರಲ್ಲಿ 3-00 ಎಕರೆ ವಿಸ್ತೀರ್ಣದ ಭೂ ಪರಿವರ್ತಿತ ಜಮೀನಿನ ಚಕ್ಕುಬಂದಿ:

| | |
|---|---|
| **ಪೂರ್ವಕ್ಕೆ** | ಸ.ನಂ.30 ರ ಜಮೀನು |
| **ಪಶ್ಚಿಮಕ್ಕೆ** | ಸ.ನಂ.27 ರ ಜಮೀನು |
| **ಉತ್ತರಕ್ಕೆ** | ಸ.ನಂ.28 ರ ಉಳಿಕೆ ಜಮೀನು |
| **ದಕ್ಷಿಣಕ್ಕೆ** | ಸ.ನಂ.28 ರ ಉಳಿಕೆ ಜಮೀನು |

ಸಹಿ/-
(ಹೆಚ್.ರಾಮಾಂಜನೇಯ),
ವಿಶೇಷ ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ,ಬೆಂಗಳೂರು.

ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಲಾಗಿದೆ.

1) ತಹಶೀಲ್ದಾರರು, ಬೆಂಗಳೂರು ಉತ್ತರ (ಅಪರ) ತಾಲ್ಲೂಕು ರವರಿಗೆ ಮೂಲ ಕಡತ ಹಾಗೂ ಚಲನ್‌ಯೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಗಣಕೀಕೃತ ಆರ್.ಟಿ.ಸಿ.ಯಲ್ಲಿ ಕೂಡಲೆ ನಮೂದಿಸತಕ್ಕದ್ದು ಮತ್ತು ಈ ಜಮೀನಿಗೆ ಖಾತೇದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿತಗೊಳಿಸುವುದು.
2) ನಗರ ಯೋಜಕ ಸದಸ್ಯರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3) ಉಪವಿಭಾಗಾಧಿಕಾರಿಗಳು, ಬೆಂಗಳೂರು ಉತ್ತರ ಉಪವಿಭಾಗ, ಬೆಂಗಳೂರು.
4) ಉಪನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪವಿಭಾಗ, ಬೆಂಗಳೂರು ಇವರಿಗೆ ಆರ್.ಟಿ.ಸಿ. ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5) ಉಪ ನೋಂದಣಾಧಿಕಾರಿಗಳು, ಯಲಹಂಕ ಹೋಬಳಿ, ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಬೆಂಗಳೂರು ಇವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
6) ಅರ್ಜಿದಾರರಾದ ಶ್ರೀ ವಾಸುದೇವರೆಡ್ಡಿ ಬಿನ್ ಜಿ.ಕೃಷ್ಣಾರೆಡ್ಡಿ , ನಂ.459, ತ್ರಿವೇಣಿ ರಸ್ತೆ, ಕೆ.ಆರ್.ಎಕ್ಸ್‌ಟೆನ್ಷನ್, ಯಶವಂತಪುರ ಟೌನ್, ಬೆಂಗಳೂರು 22 ರವರಿಗೆ ದೃಢೀಕೃತ ಅಂಚೆ ಮೂಲಕ ಕಳುಹಿಸಲಾಗಿದೆ.
7) ಹೆಚ್ಚಿನ ಪ್ರತಿ.

ವಿಶೇಷ ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ,ಬೆಂಗಳೂರು.

23/03/10